Akashvani : Bangalore
National Bulletin In Kannada
28.06.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಸಂಸತ್ತಿನ ಉಭಯ ಸದನಗಳಲ್ಲಿಂದು ನೀಟ್ ಪರೀಕ್ಷೆ ಪ್ರಕರಣ ಸದ್ದು
- ಲೋಕಸಭಾ ಕಲಾಪ ಸೋಮವಾರಕ್ಕೆ ಮುಂದೂಡಿಕೆ; ರಾಜ್ಯಸಭೆಯಲ್ಲಿ ರಾಷ್ಟ್ರಪತಿ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ ಆರಂಭ
- ಎನ್‌ಟಿಎ ಸುಧಾರಣೆಗಾಗಿ ವಿದ್ಯಾರ್ಥಿಗಳು ಮತ್ತು ಪೋಷಕರಿಂದ ಸಲಹೆ ಕೋರಿದ ಉನ್ನತ ಮಟ್ಟದ ತಜ್ಞರ ಸಮಿತಿ
- ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಫೈನಲ್ ಪಂದ್ಯದಲ್ಲಿ ನಾಳೆ ಭಾರತ - ದಕ್ಷಿಣ ಆಫ್ರಿಕಾ ಮುಖಾಮುಖಿ

<><*<><>*><>

ಸಂಸತ್ತಿನ ಉಭಯ ಸದನಗಳಲ್ಲಿಂದು ನೀಟ್ ಪರೀಕ್ಷೆ ಪ್ರಕರಣ ಸದ್ದು ಮಾಡಿತು. ನೀಟ್ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದೆ ಎಂದು ಆರೋಪಿಸಿ ಪ್ರತಿಪಕ್ಷಗಳು ಪ್ರತಿಭಟನೆ ನಡೆಸಿದ ಹಿನ್ನೆಲೆ ಲೋಕಸಭೆ ಕಲಾಪವನ್ನು ಇಂದು ಮಧ್ಯಾಹ್ನವೇ ಒಂದು ದಿನದ ಮಟ್ಟಿಗೆ ಮುಂದೂಡಲಾಯಿತು. ಮಧ್ಯಾಹ್ನ ೧೨ ಗಂಟೆಗೆ ಮೊದಲ ಬಾರಿಗೆ ಮುಂದೂಡಲ್ಪಟ್ಟ ನಂತರ, ಕಾಂಗ್ರೆಸ್ ಸದಸ್ಯರು ಈ ವಿಷಯಕ್ಕೆ ಸಂಬಂಧಿಸಿದಂತೆ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಘೋಷಣೆ ಕೂಗಿದರು. ಕಾಂಗ್ರೆಸ್, ಡಿಎಂಕೆ, ಟಿಎಂಸಿ, ಸಮಾಜವಾದಿ ಪಕ್ಷ ಮತ್ತು ಇತರ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸ್ಪೀಕರ್ ಓಂ ಬಿರ್ಲಾ, ಸಮಸ್ಯೆಯನ್ನು ಪರಿಶೀಲಿಸಲು ಸಮಿತಿಯನ್ನು ರಚಿಸಲಾಗಿದೆ. ಸುಗಮ ಕಲಾಪ ನಡೆಸಲು ಬಿಡದಿರುವುದು ಸಂಸದೀಯ ಪ್ರಜಾಪ್ರಭುತ್ವಕ್ಕೆ ಶೋಭೆ ತರುವುದಿಲ್ಲ ಎಂದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲಿನ ಚರ್ಚೆಯಲ್ಲಿ ಸದಸ್ಯರು ಈ ವಿಷಯವನ್ನು ಪ್ರಸ್ತಾಪಿಸಬಹುದು ಎಂದು ಅವರು ಹೇಳಿದರು.

<><*<><>*><>

ನೀಟ್ ಪರೀಕ್ಷೆ ವಿಚಾರವಾಗಿ ಪ್ರತಿಪಕ್ಷಗಳ ಗದ್ದಲದ ನಡುವೆಯೇ ರಾಜ್ಯಸಭೆಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ ಆರಂಭವಾಗಿದೆ. ಚರ್ಚೆಗೆ ಒಟ್ಟು ೨೧ ಗಂಟೆಗಳ ಕಾಲಾವಕಾಶ ನೀಡಲಾಗಿದೆ. ಚರ್ಚೆಯನ್ನು ಆರಂಭಿಸಿದ ಬಿಜೆಪಿ ಸಂಸದ ಸುಧಾಂಶು ತ್ರಿವೇದಿ, ಕಳೆದ ೧೦ ವರ್ಷಗಳ ನರೇಂದ್ರ ಮೋದಿ ಸರ್ಕಾರದ ಯಶಸ್ಸಿನ ಕುರಿತು ವಿವರಿಸಿದರು. ಲೋಕಸಭೆ ಚುನಾವಣೆಯನ್ನು ಉಲ್ಲೇಖಿಸಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ಹೋಲಿಸಿದರೆ ದಕ್ಷಿಣ ರಾಜ್ಯಗಳಲ್ಲಿ ಎನ್‌ಡಿಎ ಹೆಚ್ಚು ಮತಗಳನ್ನು ಪಡೆದಿದೆ ಎಂದು ಹೇಳಿದರು.  ಭಾರತ, ಬ್ರಿಟನ್‌ಅನ್ನು ಹಿಂದಿಕ್ಕಿ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮಿದೆ ಎಂದ ಅವರು, ಎನ್‌ಡಿಎ ಸರ್ಕಾರ ೩೪ ಕೋಟಿ ಎಲ್‌ಇಡಿ ಬಲ್ಬ್‌ಗಳನ್ನು ವಿತರಿಸಿದ್ದು, ಹಸಿರು ಇಂಧನ ಉತ್ಪಾದನೆಗೆ ಬದ್ಧವಾಗಿದೆ ಎಂದು ತ್ರಿವೇದಿ ಹೇಳಿದರು. ಬಿಜೆಪಿ ಸಂಸದರಾದ ರಾಕೇಶ್ ಸಿನ್ಹಾ, ಭೀಮ್ ಸಿಂಗ್, ವೈಎಸ್‌ಆರ್ ಕಾಂಗ್ರೆಸ್ ಸಂಸದ ಗೊಲ್ಲ ಬಾಬುರಾವ್ ಇತರರು ಚರ್ಚೆಯಲ್ಲಿ ಭಾಗವಹಿಸಿದ್ದರು. ಬಳಿಕ ಮಾತನಾಡಿದ ವೈಎಸ್‌ಆರ್ ಕಾಂಗ್ರೆಸ್ ಸಂಸದ ಗೋಲಾ ಬಾಬು ರಾವ್, ಜಮ್ಮು ಮತ್ತು ಕಾಶ್ಮೀರದಲ್ಲಿ ೩೭೦ ನೇ ವಿಧಿಯನ್ನು ರದ್ದುಗೊಳಿಸಿದ್ದಕ್ಕಾಗಿ ಬಿಜೆಪಿ ನೇತೃತ್ವದ ಸರ್ಕಾರವನ್ನು ಶ್ಲಾಘಿಸಿದರು.  ಭಾರತೀಯ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ೩೭೦ ನೇ ವಿಧಿಯ ರದ್ದತಿಯ ಪರವಾಗಿದ್ದರು. ಆಂಧ್ರಪ್ರದೇಶದ ಮುಖ್ಯಮಂತ್ರಿ ಮತ್ತು ಟಿಡಿಪಿ ಮುಖ್ಯಸ್ಥ ಚಂದ್ರಬಾಬು ನಾಯ್ಡು ಅವರು ಆಂಧ್ರಪ್ರದೇಶಕ್ಕೆ ವಿಶೇಷ ವರ್ಗದ ಸ್ಥಾನಮಾನಕ್ಕಾಗಿ ಒತ್ತಾಯಿಸುವಂತೆ ಅವರು ಕೋರಿದರು. ಆಂಧ್ರಪ್ರದೇಶವು ಅಭಿವೃದ್ಧಿ ಸೂಚ್ಯಂಕಗಳ ಕೊರತೆಯನ್ನು ಹೊಂದಿದೆ. ಹಾಗಾಗಿ ವಿಶೇಷ ಸ್ಥಾನಮಾನದ ಮೂಲಕ ರಾಜ್ಯ ಸಮಗ್ರ ಅಭಿವೃದ್ಧಿ ಹೊಂದಲಿದೆ ಎಂದು ಅವರು ಹೇಳಿದರು. ಇದಕ್ಕೂ ಮುನ್ನ ಪ್ರತಿಪಕ್ಷಗಳ ಗದ್ದಲದ ಹಿನ್ನೆಲೆ ರಾಜ್ಯಸಭಾ ಕಲಾಪವನ್ನು ಮೂರು ಬಾರಿ ಮುಂದೂಡಲಾಯಿತು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರಿಂದು ಮಾಜಿ ಪ್ರಧಾನಿ ಪಿ.ವಿ.ನರಸಿಂಹರಾವ್ ಅವರ ಜಯಂತಿಯಂದು ಅವರಿಗೆ ನಮನ ಸಲ್ಲಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪಿವಿ ನರಸಿಂಹ ರಾವ್ ಅವರು ನಾಯಕತ್ವ ಮತ್ತು ಬುದ್ಧಿವಂತಿಕೆಯಿಂದಾಗಿ ಸ್ಮರಣೀಯರಾಗಿದ್ದಾರೆ. ಪಿ.ವಿ.ನರಸಿಂಹರಾವ್ ಅವರು ರಾಷ್ಟ್ರಕ್ಕೆ ನೀಡಿದ ಅನನ್ಯ ಕೊಡುಗೆ ಗುರುತಿಸಿ ಈ ವರ್ಷದ ಆರಂಭದಲ್ಲಿ ಅವರಿಗೆ ಭಾರತ ರತ್ನ ನೀಡಿ ಗೌರವಿಸಲಾಗಿದೆ ಎಂದು ಪ್ರಧಾನಿ ಹೇಳಿದರು.

<><*<><>*><>

ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ-ಎನ್‌ಟಿಎ ಯಲ್ಲಿ ಸುಧಾರಣೆಗಳನ್ನು ಶಿಫಾರಸು ಮಾಡಲು ಶಿಕ್ಷಣ ಸಚಿವಾಲಯ ರಚಿಸಿರುವ ಉನ್ನತ ಮಟ್ಟದ ತಜ್ಞರ ಸಮಿತಿಯು ಸುಧಾರಣೆ ಮತ್ತು ಪುನರ್‌ರಚನೆಯ ಕುರಿತು ವಿದ್ಯಾರ್ಥಿಗಳು ಮತ್ತು ಪೋಷಕರಿಂದ ಸಲಹೆಗಳನ್ನು ಕೋರಿದೆ. ಸಮಿತಿಯ ನೇತೃತ್ವವನ್ನು ಇಸ್ರೋ ಮಾಜಿ ಅಧ್ಯಕ್ಷ ಡಾ ಕೆ ರಾಧಾಕೃಷ್ಣನ್ ವಹಿಸಿದ್ದು, ಮೈ ಜಿ ಓ ವಿ ಡಾಟ್ ಇನ್ ಜಾಲತಾಣದ ಮೂಲಕ ಸಲಹೆಗಳು ಮತ್ತು ಪ್ರತಿಕ್ರಿಯೆಗಳನ್ನು ಸ್ವೀಕರಿಸಲಿದೆ. ಸಾರ್ವಜನಿಕರು ತಮ್ಮ ಪ್ರತಿಕ್ರಿಯೆಗಳನ್ನು ಜುಲೈ ೭ ರವರೆಗೆ ನೀಡಬಹುದಾಗಿದೆ. ಸಮಿತಿಯು ತನ್ನ ವರದಿಯನ್ನು ಎರಡು ತಿಂಗಳೊಳಗೆ ಶಿಕ್ಷಣ ಸಚಿವಾಲಯಕ್ಕೆ ಸಲ್ಲಿಸಬೇಕಿದ್ದು, ಪರೀಕ್ಷಾ ಪ್ರಕ್ರಿಯೆಯ ಕಾರ್ಯವಿಧಾನದಲ್ಲಿನ ಸುಧಾರಣೆ, ಡೇಟಾ ಭದ್ರತಾ ಶಿಷ್ಠಾಚಾರದಲ್ಲಿ ಸುಧಾರಣೆ ಮತ್ತು ಎನ್‌ಟಿಎ ಕಾರ್ಯನಿರ್ವಹಣೆಯ ಕುರಿತು ಶಿಫಾರಸು ಮಾಡಲಿದೆ.

<><*<><>*><>

ನೀಟ್ ಪರೀಕ್ಷೆಗೆ ಸಂಬಂಧಿಸಿದಂತೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನೀಟ್ ವಿದ್ಯಾರ್ಥಿಗಳಿಗೆ ಭರವಸೆ ನೀಡಿದ್ದಾರೆ. ಸಂಸತ್ತಿನ ಆವರಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಷಯವನ್ನು ಸರ್ಕಾರ ಸೂಕ್ಷ್ಮವಾಗಿ ಪರಿಗಣಿಸಿದ್ದು, ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು. ಯಾವುದೇ ಸಮಸ್ಯೆಗಳಿದ್ದರೂ ಸದನದಲ್ಲಿ ಚರ್ಚಿಸಲು ಸರಕಾರ ಸಿದ್ಧವಿದೆ ಎಂದು ತಿಳಿಸಿದರು.

<><*<><>*><>

೧೯೮೯ ರ ಬ್ಯಾಚ್‌ನ ಭಾರತೀಯ ವಿದೇಶಾಂಗ ಸೇವೆಯ ಅಧಿಕಾರಿ ವಿಕ್ರಮ್ ಮಿಸ್ರಿ ಅವರನ್ನು ಮುಂದಿನ ವಿದೇಶಾಂಗ ಕಾರ್ಯದರ್ಶಿಯಾಗಿ ನೇಮಿಸಲಾಗಿದೆ. ವಿನಯ್ ಮೋಹನ್ ಕ್ವಾತ್ರಾ ಅವರ ಅಧಿಕಾರಾವಧಿಯು ಮುಂದಿನ ತಿಂಗಳು ೧೪ ರಂದು ಕೊನೆಗೊಳ್ಳುತ್ತಿರುವ ಹಿನ್ನೆಲೆ ಮಿಸ್ರಿ ಅವರನ್ನು ನೇಮಕ ಮಾಡಲಾಗಿದೆ. ಪ್ರಸ್ತುತ ರಾಷ್ಟ್ರೀಯ ಭದ್ರತಾ ಮಂಡಳಿಯ ಉಪ ಭದ್ರತಾ ಸಲಹೆಗಾರರಾಗಿ ಅವರು ಸೇವೆ ಸಲ್ಲಿಸುತ್ತಿದ್ದಾರೆ. ಚೀನಾ, ಮ್ಯಾನ್ಮಾರ್ ಮತ್ತು ಸ್ಪೇನ್‌ನಲ್ಲಿ ಭಾರತೀಯ ರಾಯಭಾರಿಯಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿರುವ ಅವರು, ೧೯೯೭ರಲ್ಲಿ ಇಂದರ್ ಕುಮಾರ್ ಗುಜ್ರಾಲ್, ೨೦೧೨ರಲ್ಲಿ ಮನಮೋಹನ್ ಸಿಂಗ್ ಮತ್ತು ೨೦೧೪ರಲ್ಲಿ ನರೇಂದ್ರ ಮೋದಿ ಸೇರಿದಂತೆ ಒಟ್ಟು ಮೂವರು ಪ್ರಧಾನಮಂತ್ರಿಗಳ ಖಾಸಗಿ ಕಾರ್ಯದರ್ಶಿಯಾಗಿಯೂ ಸೇವೆ ಸಲ್ಲಿಸಿದ್ದಾರೆ.

<><*<><>*><>

ಉತ್ತರಪ್ರದೇಶದ ನೋಯ್ಡಾದ ಕೊಳಚೆ ನೀರು ಸಂಸ್ಕರಣಾ ಘಟಕ ಒಂದರಲ್ಲಿ ಮೂವರು ಕಾರ್ಮಿಕರು ಸಾವನ್ನಪ್ಪಿದ ವರದಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ-ಎನ್‌ಎಚ್‌ಆರ್‌ಸಿ ಉತ್ತರಪ್ರದೇಶ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ. ಮಾಧ್ಯಮ ವರದಿಯನ್ನು ಸ್ವಯಂಪ್ರೇರಿತವಾಗಿ ಪರಿಗಣಿಸಿ, ಎನ್‌ಎಚ್‌ಆರ್‌ಸಿ, ಉತ್ತರಪ್ರದೇಶ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾನಿರ್ದೇಶಕರಿಗೆ ಒಂದು ವಾರದೊಳಗೆ ವಿವರವಾದ ವರದಿಯನ್ನು ನೀಡುವಂತೆ ನೋಟಿಸ್ ನೀಡಿದೆ. ಪ್ರಕರಣದಲ್ಲಿ ದಾಖಲಾದ ಎಫ್‌ಐಆರ್‌ನ ಸ್ಥಿತಿಗತಿ ಮತ್ತು ತಪ್ಪಿತಸ್ಥರ ವಿರುದ್ಧ ತೆಗೆದುಕೊಂಡ ಕ್ರಮವನ್ನು ವರದಿ ಒಳಗೊಂಡಿರಬೇಕು ಎಂದಿರುವ ಎನ್‌ಎಚ್‌ಆರ್‌ಸಿ, ಸಂಬಂಧಪಟ್ಟ ಅಧಿಕಾರಿಗಳು ಮೃತ ಕಾರ್ಮಿಕರ ಸಂಬಂಧಿಕರಿಗೆ ನೀಡಿರುವ ಪರಿಹಾರ ಮತ್ತು ಪುನರ್ವಸತಿ ಕುರಿತಂತೆ ವಿವಿರ ನೀಡುವಂತೆ ಕೇಳಿದೆ.

<><*<><>*><>

ರಹಸ್ಯ ರಕ್ಷಣಾ ಮಾಹಿತಿ ಸೋರಿಕೆಗೆ ಸಂಬಂಧಿಸಿದಂತೆ ೨೦೨೧ರ ವಿಶಾಖಪಟ್ಟಣಂ ಪಾಕಿಸ್ತಾನದ ಐಎಸ್‌ಐ ಸಾಂಸ್ಥೆ ಬೇಹುಗಾರಿಕೆ ಪ್ರಕರಣದಲ್ಲಿ ಭಾಗಿಯಾಗಿರುವ ಶಂಕಿತರನ್ನು ಪತ್ತೆಹಚ್ಚಲು, ರಾಷ್ಟ್ರೀಯ ತನಿಖಾ ಸಂಸ್ಥೆ ಎನ್‌ಐಎ ಇಂದು ಗುಜರಾತ್ ಮತ್ತು ಮಹಾರಾಷ್ಟ್ರದ ಮೂರು ಸ್ಥಳಗಳಲ್ಲಿ ವ್ಯಾಪಕ ಶೋಧ ನಡೆಸಿತು. ಭಾರತೀಯ ರಕ್ಷಣಾ ಸಂಸ್ಥೆಗಳ ಮೇಲೆ ಬೇಹುಗಾರಿಕೆ ನಡೆಸಲು ಪಾಕಿಸ್ತಾನದಿಂದ ಹಣ ಪಡೆದಿರುವ ಶಂಕಿತರ ನಿವಾಸಗಳನ್ನು ಎನ್‌ಐಎ ತಂಡಗಳು ಕೂಲಂಕುಷವಾಗಿ ಶೋಧಿಸಿದ್ದರು. ತಪಾಸಣೆಯ ವೇಳೆ ಮೊಬೈಲ್ ಫೋನ್‌ಗಳು ಮತ್ತು ದಾಖಲೆಗಳು ಸೇರಿದಂತೆ ಹಲವಾರು ದೋಷಾರೋಪಣೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಎನ್‌ಐಎ ಜೂನ್ ೨೦೨೩ ರಲ್ಲಿ ಪ್ರಕರಣವನ್ನು ಕೈಗೆತ್ತಿಕೊಂಡು ತಲೆಮರೆಸಿಕೊಂಡಿರುವ ಪಾಕಿಸ್ತಾನಿ ಪ್ರಜೆ ಸೇರಿದಂತೆ ಇಬ್ಬರು ಆರೋಪಿಗಳ ವಿರುದ್ಧ ಆರೋಪಪಟ್ಟಿ ಸಲ್ಲಿಸಿತು. ಇದರ ಬೆನ್ನಲ್ಲೇ ಪಾಕಿಸ್ತಾನಿ ಪ್ರಜೆ ಸೇರಿದಂತೆ ಇತರ ಮೂವರ ವಿರುದ್ಧ ಇನ್ನೆರಡು ಆರೋಪಪಟ್ಟಿಗಳು ದಾಖಲಾಗಿವೆ.

<><*<><>*><>

ಜಮ್ಮುವಿನ ಶಿಬಿರದಿಂದ ಇಂದು ಮುಂಜಾನೆ ಹೊರಟ ಅಮರನಾಥ ಯಾತ್ರಾರ್ಥಿಗಳ ಮೊದಲ ತಂಡ ಬಿಗಿ ಭದ್ರತೆಯ ನಡುವೆ ಇಂದು ಮಧ್ಯಾಹ್ನ ಕಾಶ್ಮೀರ ಕಣಿವೆಯನ್ನು ಪ್ರವೇಶಿಸಿದೆ. ನವಯುಗ್ ಸುರಂಗವನ್ನು ದಾಟಿದ ನಂತರ ಯಾತ್ರಾರ್ಥಿಗಳಿಗೆ ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ

ಇಲಾಖೆಯ ಅಧಿಕಾರಿಗಳು ಸ್ವಾಗತಿಸದರು. ಈ ವರ್ಷದ ಅಮರನಾಥ ಯಾತ್ರೆ ನಾಳೆ ಕಾಶ್ಮೀರ್ ಕಣಿವೆಯ ಬಲ್ಟಾಲ್ ಮತ್ತು ಚಂದನವಾಡಿ ಎಂಬ ಎರಡು ಮಾರ್ಗಗಳಿಂದ ಆರಂಭವಾಗಲಿದೆ.

<><*<><>*><>

ರಾಷ್ಟ್ರ ರಾಜಧಾನಿ ದೆಹಲಿಗೆ ಮಾನ್ಸೂನ್ ಆಗಮಿಸಿದ್ದು, ನಗರದಲ್ಲಿ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಇಂದು ಬೆಳ್ಳಂಬೆಳಗ್ಗೆ ನಗರದ ವಿವಿಧೆಡೆ ಧಾರಾಕಾರ ಮಳೆಯಾಗಿದೆ. ಸಫ್ದರ್‌ಜಂಗ್ ಹವಾಮಾನ ಕೇಂದ್ರವು ಸುಮಾರು ೨೨೮ ಮಿಲಿಮೀಟರ್ ಮಳೆಯನ್ನು ದಾಖಲಿಸಿದ್ದರೆ, ಲೋಧಿ ರಸ್ತೆಯಲ್ಲಿ ಸುಮಾರು ಇನ್ನೂರು ಮಿಲಿಮೀಟರ್ ಮಳೆಯಾಗಿದೆ ಎಂದು ಇಲಾಖೆ ತಿಳಿಸಿದೆ. ದೆಹಲಿಯಲ್ಲಿಂದು ಸಾಧಾರಣದಿಂದ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಉತ್ತರ ಪ್ರದೇಶ, ರಾಜಸ್ಥಾನ ಮತ್ತು ಬಿಹಾರ ಸೇರಿದಂತೆ ಉತ್ತರ ಮತ್ತು ಮಧ್ಯ ಭಾರತದ ಬಹುತೇಕ ಭಾಗಗಳಲ್ಲೂ ಮಾನ್ಸೂನ್ ಆಗಮಿಸಿದೆ. ಮುಂದಿನ ಎರಡು ದಿನಗಳ ಕಾಲ ಈ ಪ್ರದೇಶದಲ್ಲಿ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ನೀಡಿದೆ.

<><*<><>*><>

ಜಗತ್ತಿನಾದ್ಯಂತದ ಕ್ರಿಕೆಟ್ ಪ್ರೇಮಿಗಳು ಕಾತರದಿಂದ ಕಾಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯಕ್ಕೆ ನಾಳೆ ವೆಸ್ಟ್ ಇಂಡೀಸ್‌ನ ಬಾರ್ಬಡೋಸ್‌ನ ಕೆನ್ಸಿಂಗ್‌ಟನ್ ಓವಲ್ ಕ್ರಿಡಾಂಗಣದಲ್ಲಿ ವೇದಿಕೆ ಸಜ್ಜಾಗಿದೆ. ಗಯಾನಾದಲ್ಲಿ ಕಳೆದ ರಾತ್ರಿ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಭಾರತ, ಇಂಗ್ಲೆಂಡ್ ತಂಡವನ್ನು ಮಣಿಸುವುದರೊಂದಿಗೆ ಫೈನಲ್ ಪ್ರವೇಶಿಸಿದ್ದು, ವಿಶ್ವಕಪ್ ಟ್ರೋಫಿಗಾಗಿ ದಕ್ಷಿಣ ಆಫ್ರಿಕಾದೊಂದಿಗೆ ಸೆಣಸಾಟ ನಡೆಸಲಿದೆ. ೨೦೧೩ ರ ಚಾಂಪಿಯನ್ ಟ್ರೋಫಿ ಗೆದ್ದ ಬಳಿಕ, ಐಸಿಸಿ ಪ್ರಶಸ್ತಿ ಜಯಿಸಲು ವಿಫಲವಾಗಿರುವ ಭಾರತ, ಮೊದಲ ಬಾರಿಗೆ ಐಸಿಸಿ ವಿಶ್ವಕಪ್ ಫೈನಲ್ ಪ್ರವೇಶಿಸಿರುವ ದಕ್ಷಿಣ ಆಫ್ರಿಕಾ ತಂಡದ ವಿರುದ್ಧ ಸಂಘಟಿತ ಪ್ರದರ್ಶನ ನೀಡಲು ಸಕಲ ಸಿದ್ಧತೆ ಕೈಗೊಂಡಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

<><*<><>*><>

ಚೆನ್ನೈನ ಎಂ.ಎ.ಚಿದಂಬರಂ ಸ್ಟೇಡಿಯಂನಲ್ಲಿ ಇಂದಿನಿಂದ ಆರಂಭವಾಗಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮಹಿಳಾ ಕ್ರಿಕೆಟ್‌ನ ಏಕೈಕ ಟೆಸ್ಟ್ ಪಂದ್ಯದಲ್ಲಿ ಆತಿಥೇಯ ಭಾರತ ತಂಡ ಉತ್ತಮ ಆರಂಭ ಕಂಡಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಭಾರತ ತಂಡದ

ಮೊದಲ ದಿನದ ಅಂತ್ಯಕ್ಕೆ ೪ ವಿಕೆಟ್ ನಷ್ಟಕ್ಕೆ ೫೨೫ ರನ್ ಗಳಿಸಿ, ಎರಡನೇ ದಿನಕ್ಕೆ ಬ್ಯಾಂಟಿಂಗ್ ಕಾಯ್ದುಕೊಂಡಿದೆ.

<><*<><>*><>

ಯುಎಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಪ್ರಿಯಾಂಶು ರಾಜಾವತ್, ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಮಾಳವಿಕಾ ಬನ್ಸೋಡ್ ಹಾಗೂ ಮಹಿಳೆಯರ ಡಬಲ್ಸ್ ವಿಭಾಗದಲ್ಲಿ ತ್ರೀಸಾ ಜೊಲ್ಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿಯು ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿವೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>